ವಿಷಯ:- ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯವರು ಕಟ್ಟುತ್ತಿರುವ ಕ್ರೀಡಾಂಗಣ ಕೆಲಸವನ್ನು ಬೇಗಮುಗಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೨೩:- (೪೧೬)
ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ)
ಮಾನ್ಯ ಯುವಜನಸೇವಾ ಮತ್ತು ಕ್ರೀಡಾ ಹಾಗೂ ದೈಹಿಕ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯವರು (ಪಿ.ಡಬ್ಲ್ಯು.ಡಿ) ಕಟ್ಟುತ್ತಿರುವ ಕ್ರೀಡಾಂಗಣ ಕೆಲಸ ಅರ್ಧಕ್ಕೆ ನಿಂತ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಈ ಕೆಲಸಕ್ಕೆ ಇನ್ನೂ ಎಷ್ಟು ಹಣ ಬೇಕಾಗುವುದು ಮತ್ತು ಈ ಕೆಲಸವನ್ನು ಪೂರ್ಣಗೊಳಿಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು.

ಇ) ಹಿಂದಿನ ವಿಧಾನ ಸಭೆಯಲ್ಲಿ ಈ ಕೆಲಸವನ್ನು ಬೇಗ ಮುಗಿಸಲಾಗುವುದೆಂದು ಮತ್ತು ಈ ಕೆಲಸಕ್ಕೆ ಹಣ ಬಿಡುಗಡೆ ಮಾಡಲಾಗುವುದೆಂದು ನೀಡಿರುವ ಆಶ್ವಾಸನೆ ಪ್ರಕಾರ ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು?

ಡಾ: ಡಿ. ಪ್ರೇಮಚಂದ್ರ ಸಾಗರ್
(ಯುವಜನಸೇವಾ ಕ್ರೀಡಾ ಹಾಗೂ ದೈಹಿಕ ಶಿಕ್ಷಣ ಸಚಿವರು)

ಹೌದು

ಈ ಕ್ರೀಡಾಂಗಣ ನಿರ್ಮಾಣವು ಎನ್.ಆರ್.ಇ.ಪಿ. ಯಡಿಯಲ್ಲಿ ತೆಗೆದುಕೊಳ್ಳಲಾಗಿತ್ತು ಜಮೀನನ್ನು ಈ ಕ್ರೀಡಾಂಗಣ ನಿರ್ಮಾಣ ಮಾಡಲಿರುವ ಜಮೀನನ್ನು ಶ್ರೀ ವೀರ ಭದ್ರೇಶ್ವರ ಪ್ರೌಢ ಶಾಲೆಗೆ ವರ್ಗಾಯಿಸಲ್ಪಟ್ಟಿದ್ದು ಸದರಿ ಸಂಸ್ಥೆಯು ಆಟದ ಮೈದಾನದ ಅಭಿವೃದ್ಧಿ ಹಾಗೂ ಕ್ರೀಡಾ ಸಲಕರಣೆಗಳಿಗಾಗಿ ರೂ.೧.೦೦ ಲಕ್ಷ ಕೇಂದ್ರ ಸರ್ಕಾರದ ಧನ ಸಹಾಯಕ್ಕಾಗಿ ಅರ್ಜಿ ಸಲ್ಲಿಸಿದ್ದು ಸದರಿ ಅರ್ಜಿಯು ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ:- ಸವದತ್ತಿ ತಾಲ್ಲೂಕು ಹೊಸೂರು ಗ್ರಾಮದಲ್ಲಿ ಕಟ್ಟುತ್ತಿರುವ ಕ್ರೀಡಾಂಗಣ ಕೆಲಸ ಪೂರ್ಣಗೊಳಿಸಲು ಒತ್ತಾಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೨೫:- (೪೧೪)
ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ)
ಮಾನ್ಯ ಯುವಜನಸೇವಾ ಕ್ರೀಡಾ ಹಾಗೂ ದೈಹಿಕ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಭೂಸೇನಾ ನಿಗಮದವರು ಕಟ್ಟುತ್ತಿರುವ ಕ್ರೀಡಾಂಗಣ ಕೆಲಸವು ಅರ್ಧಕ್ಕೆ ನಿಂತ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಕೆಲಸವನ್ನು ಪೂರ್ಣ ಮುಗಿಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು.

ಇ) ಈಗಾಗಲೇ ಭೂಸೇನಾ ನಿಗಮದವರು ಎಷ್ಟು ಹಣವನ್ನು ಈ ಕೆಲಸಕ್ಕಾಗಿ ಖರ್ಚು ಮಾಡಿರುವರು ಮತ್ತು ಈ ಕೆಲಸವನ್ನು ಪೂರ್ಣ ಮುಗಿಸಲು ಇನ್ನು ಎಷ್ಟು ಹಣ ಬೇಕಾಗುವುದು.